# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1937
2. ಮಾನ್ಯ ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ್ ಅರಳಿ
3. ಉತ್ತರಿಸಬೇಕಾದ ದಿನಾಂಕ : 23.03.2021
4. ಉತ್ತರಿಸುವ ಸಚಿವರು : ಮಾನ್ಯ ಪೌರಾಡಳಿತ ಮತ್ತು ಸಕ್ಕರೆ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರಗಳು |
|---|---|---|
| (ಅ) | ಬೀದರ್ ಜಿಲ್ಲೆಯಲ್ಲಿ ಎಷ್ಟು ಸಕ್ಕರೆ ಕಾರ್ಖಾನೆಗಳು ಅಸ್ತಿತ್ವದಲ್ಲಿವೆ; ಅವುಗಳ ಕಬ್ಬು ಅರೆಯುವ ಸಾಮರ್ಥ್ಯ ಎಷ್ಟು; ಹಾಗೂ ಕಾರ್ಖಾನೆಗಳ ಸರಾಸರಿ ಉತ್ಪಾದನೆ ಎಷ್ಟು; (Recovery) | ಬೀದರ್ ಜಿಲ್ಲೆಯಲ್ಲಿ ಒಟ್ಟು 06 ಸಕ್ಕರೆ ಕಾರ್ಖಾನೆಗಳಿದ್ದು, ಈ ಪೈಕಿ 04 ಸಕ್ಕರೆ ಕಾರ್ಖಾನೆಗಳು ಕಾರ್ಯನಿರ್ವಹಿಸುತ್ತಿವೆ. 02 ಸಕ್ಕರೆ ಕಾರ್ಖಾನೆಗಳು ಸ್ಥಗಿತಗೊಂಡಿರುತ್ತವೆ. ಸದರಿ 06 ಸಕ್ಕರೆ ಕಾರ್ಖಾನೆಗಳ ಪ್ರತಿ ದಿನ ಕಬ್ಬು ಅರೆಯುವ ಸಾಮರ್ಥ್ಯ ಮತ್ತು ವಾರ್ಷಿಕ ಸರಾಸರಿ ಉತ್ಪಾದನಾ ಇಳುವರಿ ವಿವರ ಈ ಕೆಳಕಂಡಂತೆ ಇರುತ್ತದೆ. |

| ಕ್ರ.ಸಂ. | ಕಾರ್ಖಾನೆಯ ಹೆಸರು | ಕಬ್ಬು ಅರೆಯುವ ಸಾಮರ್ಥ್ಯ (ಟಿಸಿಡಿಗಳಲ್ಲಿ) | ಸರಾಸರಿ ಉತ್ಪಾದನಾ ಇಳುವರಿ (2020-21ನೇ ಹಂಗಾಮಿಗೆ ದಿ:28.2.2021ರಲ್ಲಿದ್ದಂತೆ) |
|---|---|---|---|
| 1 | ಭಾಲ್ಕೇಶ್ವರ ಶುಗರ್ಸ್ ಲಿ., ಬಾಜೋಳಗಾ, ಭಾಲ್ಕಿ ತಾಲ್ಲೂಕು, ಬೀದರ್ ಜಿಲ್ಲೆ. | 4000 | 6.16% |
| 2 | ಬೀದರ್ ಕಿಸಾನ್ ಶಕ್ಕರ್ ಕಾರ್ಖಾನಾ ಲಿ., ಮೊಗ್ದಾಲ್ ಗ್ರಾಮ, ಬೀದರ್ ತಾಲ್ಲೂಕು ಮತ್ತು ಜಿಲ್ಲೆ. | 3500 | 8.90% |
| 3 | ಮಹಾತ್ಮ ಗಾಂಧಿ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಹಿಚೆಕ್‌ಮಠ್, ಭಾಲ್ಕಿ ತಾಲ್ಲೂಕು, ಬೀದರ್ ಜಿಲ್ಲೆ. | 3500 | 8.17% |
| 4 | ನಾರಂಜಾ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಇಮಾಂಪುರ, ಬೀದರ್ ತಾಲ್ಲೂಕು ಮತ್ತು ಜಿಲ್ಲೆ. | 2500 | 9.10% |
| | **ಸ್ಥಗಿತಗೊಂಡಿರುವ ಸಕ್ಕರೆ ಕಾರ್ಖಾನೆಗಳು** | | |
| 1 | ಭವಾನಿ ಶುಗರ್ಸ್ ಲಿ., ಬರೂರು, ಬೀದರ್ ತಾಲ್ಲೂಕು, ಬೀದರ್ ಜಿಲ್ಲೆ. | 1000 | 9.36 % (2018-19ನೇ ಹಂಗಾಮಿಗೆ) |
| 2 | ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಹಳ್ಳಿಖೇಡ್, ಹುಮ್ನಾಬಾದ್ ತಾಲ್ಲೂಕು, ಬೀದರ್ ಜಿಲ್ಲೆ. | 3500 | 6.85% (2018-19ನೇ ಹಂಗಾಮಿಗೆ) |

......2

<table>
<tr>
<td>(ಆ)</td>
<td>ಈ ಕಾರ್ಖಾನೆಗಳ ಹೆಸರಿನಲ್ಲಿ ಇರುವ ಸಾಲವೆಷ್ಟು; (ಕಾರ್ಖಾನೆವಾರು ವಿವರ ನೀಡುವುದು)</td>
<td>ಈ ಕಾರ್ಖಾನೆಗಳು ವಿವಿಧ ಮೂಲಗಳಿಂದ ಪಡೆದಿರುವ ಒಟ್ಟು ಸಾಲಗಳ ವಿವರ ಈ ಕೆಳಕಂಡಂತಿದೆ.<br>(ರೂ. ಕೋಟಿಗಳಲ್ಲಿ)
<table>
<tr><th>ಕ್ರ. ಸಂ.</th><th>ಕಾರ್ಖಾನೆಯ ಹೆಸರು</th><th>ಪಡೆದಿರುವ ಸಾಲದ ಮೊತ್ತ</th></tr>
<tr><td>1</td><td>ಭಾಲ್ಕೇಶ್ವರ ಶುಗರ್ಸ್ ಲಿ., ಬಾಜೋಳಗಾ, ಭಾಲ್ಕಿ ತಾಲ್ಲೂಕು, ಬೀದರ್ ಜಿಲ್ಲೆ.</td><td>295.88</td></tr>
<tr><td>2</td><td>ಬೀದರ್ ಕಿಸಾನ್ ಶಕ್ಕರ್ ಕಾರ್ಖಾನಾ ಲಿ., ಮೊಗ್ದಾಲ್ ಗ್ರಾಮ, ಬೀದರ್ ತಾಲ್ಲೂಕು, ಬೀದರ್ ಜಿಲ್ಲೆ.</td><td>203.20</td></tr>
<tr><td>3</td><td>ಮಹಾತ್ಮ ಗಾಂಧಿ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಹಿಚೆಕ್‌ಮತ್, ಭಾಲ್ಕಿ ತಾಲ್ಲೂಕು, ಬೀದರ್ ಜಿಲ್ಲೆ.</td><td>351.80</td></tr>
<tr><td>4</td><td>ನಾರಂಜಾ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಇಮಾಂಪುರ, ಬೀದರ್ ತಾಲ್ಲೂಕು, ಬೀದರ್ ಜಿಲ್ಲೆ.</td><td>576.98</td></tr>
<tr><td colspan="3">ಸ್ಥಗಿತಗೊಂಡಿರುವ ಸಕ್ಕರೆ ಕಾರ್ಖಾನೆಗಳು</td></tr>
<tr><td>5</td><td>ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಹಳ್ಳಿಖೇಡ್, ಹುಮ್ನಾಬಾದ್ ತಾಲ್ಲೂಕು, ಬೀದರ್ ಮತ್ತು ಜಿಲ್ಲೆ.</td><td>274.87</td></tr>
</table>
</td>
</tr>
<tr>
<td>ಇ)</td>
<td>ಈ ಕಾರ್ಖಾನೆಗಳು ರೈತರಿಗೆ ಪ್ರತಿ ಟನ್‌ಗೆ ಎಷ್ಟು ಬೆಲೆ ನಿಗದಿ ಮಾಡಲಾಗಿದೆ; ಸದರಿ ಹಣವನ್ನು ರೈತರಿಗೆ ಪಾವತಿಸಲಾಗಿದೆಯೇ;</td>
<td>ಕಾರ್ಖಾನೆಗಳು 2019-20ನೇ ಸಾಲಿನಲ್ಲಿ ನುರಿಸಿದ ಕಬ್ಬಿನಿಂದ ಉತ್ಪಾದಿಸಲಾದ ಸಕ್ಕರೆ ಇಳುವರಿಯನ್ನು ಆಧಾರವಾಗಿಟ್ಟುಕೊಂಡು, 2020-21ನೇ ಸಾಲಿಗೆ ಬೀದರ್ ಜಿಲ್ಲೆಯ ಈ ಕೆಳಕಂಡ ಸಕ್ಕರೆ ಕಾರ್ಖಾನೆಗಳಿಗೆ ಕರ್ನಾಟಕ ಕಬ್ಬು (ಖರೀದಿ ಮತ್ತು ಸರಬರಾಜು ನಿಯಂತ್ರಣ) (ತಿದ್ದುಪಡಿ) ಅಧಿನಿಯಮ-2014ರ ಕಲಂ 9(1) ರ ಪ್ರಕಾರ ಮೊದಲ ಕಂತಿನ ರೂಪದಲ್ಲಿ ಪಾವತಿಸಬೇಕಾದ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು (FRP) ಸಕ್ಕರೆ ನಿರ್ದೇಶನಾಲಯದ ಆದೇಶದ ಸಂಖ್ಯೆ: ಡಿಎಸ್‌ಕೆ/ಎಸ್‌ಕೆ/ 19/2020-21/683 ದಿನಾಂಕ:02.11.2020ರ ರೀತ್ಯಾ ಈ ಕೆಳಕಂಡಂತೆ ಅಧಿಕೃತವಾಗಿ ಪ್ರಕಟಿಸಲಾಗಿರುತ್ತದೆ. ಈ ಕಬ್ಬಿನ ದರವು ಎಫ್.ಆರ್.ಪಿ. ನಿಯಮದಂತೆ ಎಕ್ಸ್-ಗೇಟ್ (Ex-gate) ದರವಾಗಿರುತ್ತದೆ. ಸದರಿ ಆದೇಶದಂತೆ 2020-21ನೇ ಹಂಗಾಮಿಗೆ ಬೀದರ್ ಜಿಲ್ಲೆಯಲ್ಲಿನ ಸಕ್ಕರೆ ಕಾರ್ಖಾನೆಗಳು ಕಬ್ಬು ಸರಬರಾಜು ಮಾಡಿದ ರೈತರಿಗೆ ಪಾವತಿಸಬೇಕಾದ ನ್ಯಾಯ ಮತ್ತು ಲಾಭದಾಯಕ ಬೆಲೆಯ ವಿವರಗಳು ಈ ಕೆಳಕಂಡಂತಿರುತ್ತವೆ.<br>(ರೂ.ಗಳಲ್ಲಿ)
<table>
<tr><th>ಕ್ರ. ಸಂ.</th><th>ಕಾರ್ಖಾನೆಯ ಹೆಸರು</th><th>2020-21ನೇ ಸಾಲಿಗೆ ಪ್ರತಿ ಮೆ. ಟನ್ ಕಬ್ಬಿಗೆ ಪಾವತಿಸಬೇಕಾದ ನ್ಯಾಯ ಮತ್ತು ಲಾಭದಾಯಕ ಬೆಲೆ (FRP)</th></tr>
<tr><td>1</td><td>ಭಾಲ್ಕೇಶ್ವರ ಶುಗರ್ಸ್ ಲಿ., ಬಾಜೋಳಗಾ, ಭಾಲ್ಕಿ ತಾಲ್ಲೂಕು, ಬೀದರ್ ಜಿಲ್ಲೆ.</td><td>2708-00</td></tr>
<tr><td>2</td><td>ಬೀದರ್ ಕಿಸಾನ್ ಶಕ್ಕರ್ ಕಾರ್ಖಾನಾ ಲಿ., ಮೊಗ್ದಾಲ್ ಗ್ರಾಮ, ಬೀದರ್ ತಾಲ್ಲೂಕು ಮತ್ತು ಜಿಲ್ಲೆ.</td><td>2708-00</td></tr>
<tr><td>3</td><td>ಮಹಾತ್ಮ ಗಾಂಧಿ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಹಿಚೆಕ್‌ಮತ್, ಭಾಲ್ಕಿ ತಾಲ್ಲೂಕು, ಬೀದರ್ ಜಿಲ್ಲೆ.</td><td>2708-00</td></tr>
<tr><td>4</td><td>ನಾರಂಜಾ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಇಮಾಂಪುರ, ಬೀದರ್ ತಾಲ್ಲೂಕು ಮತ್ತು ಜಿಲ್ಲೆ.</td><td>2708-00</td></tr>
</table>
</td>
</tr>
</table>

.......3

ಈ ಕಾರ್ಖಾನೆಗಳು 2020-21ನೇ ಹಂಗಾಮಿನಲ್ಲಿ ಕಬ್ಬು ಸರಬರಾಜು ಮಾಡಿದ ರೈತರಿಗೆ ಪಾವತಿಸಬೇಕಾದ ಕಬ್ಬು ಬಿಲ್ಲು ಮೊತ್ತದ ವಿವರಗಳು ಈ ಕೆಳಕಂಡಂತಿದೆ.

(ರೂ.ಲಕ್ಷಗಳಲ್ಲಿ)

| ಕ್ರ. ಸಂ. | ಕಾರ್ಖಾನೆಯ ಹೆಸರು | ಪಾವತಿಸಬೇಕಾದದ್ದು | ಪಾವತಿಸಿರುವುದು | ಬಾಕಿ |
|---|---|---|---|---|
| 1 | ಬಾಲ್ಕೇಶ್ವರ ಶುಗರ್ಸ್ ಲಿ.,ಬಾಲ್ಕಿತಾಲ್ಲೂಕು, ಬೀದರ್ ಜಿಲ್ಲೆ. | 9330 | 4566 | 4764 |
| 2 | ಬೀದರ್ ಕಿಸಾನ್ ಶಕ್ಕರ್ ಕಾರ್ಖಾನಾ ಲಿ., ಬೀದರ್ ತಾಲ್ಲೂಕು ಮತ್ತು ಜಿಲ್ಲೆ. | 6012 | 2576 | 3436 |
| 3 | ಮಹಾತ್ಮ ಗಾಂಧಿ ಸಸಕಾ ನಿ., ಬಾಲ್ಕಿ ತಾಲ್ಲೂಕು, ಬೀದರ್ ಜಿಲ್ಲೆ. | 8203 | 4221 | 3982 |
| 4 | ನಾರಂಜಾ ಸಸಕಾ ನಿ., ಬೀದರ್ ತಾಲ್ಲೂಕು, ಬೀದರ್ ಜಿಲ್ಲೆ. | 6844 | 3035 | 3809 |

ಮೇಲ್ಕಂಡಂತೆ ಬಾಕಿ ಉಳಿಸಿಕೊಂಡಿರುವ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು (ನಿಯಂತ್ರಣ) ಆದೇಶ 1966ರ ಕಲಂ 3(3)ಎ ಪ್ರಕಾರ ಮತ್ತು ಕರ್ನಾಟಕ ಕಬ್ಬು (ಖರೀದಿ ಮತ್ತು ಸರಬರಾಜು ನಿಯಂತ್ರಣ) ಅಧಿನಿಯಮ 2013 ಹಾಗೂ ತಿದ್ದುಪಡಿ ಅಧಿನಿಯಮ 2014ರನ್ವಯ ಕಾರ್ಖಾನೆಗಳು ಕಬ್ಬು ಸರಬರಾಜು ಮಾಡಿದ 14 ದಿನಗಳ ಒಳಗಾಗಿ ಕಬ್ಬು ಬಿಲ್ಲು ಪಾವತಿಸದಿದ್ದಲ್ಲಿ ಕಬ್ಬು (ನಿಯಂತ್ರಣ) ಆದೇಶ 1966ರ ಕಲಂ 3(8) ರ ಅವಕಾಶಗಳಂತೆ ಸಾಲಿಯಾನ ಶೇ. 15ರ ಬಡ್ಡಿಯೊಂದಿಗೆ ಭೂ ಕಂದಾಯ ಬಾಕಿ ಎಂದು ಪರಿಗಣಿಸಿ ವಸೂಲಿ ಮಾಡಲು ಏಕೆ ಕ್ರಮ ಕೈಗೊಳ್ಳಬಾರದು ಎಂದು ಸೂಚಿಸುವ ಶಾಸನಬದ್ಧ ನೋಟೀಸ್‌ಗಳನ್ನು ದಿನಾಂಕ: 02.02.2021 ರಂದು ಜಾರಿಗೊಳಿಸಲಾಗಿದೆ. ಪ್ರಸ್ತುತ 2020-21ನೇ ಹಂಗಾಮು ಚಾಲ್ತಿಯಲ್ಲಿರುವುದರಿಂದ ಕಾರ್ಖಾನೆಗಳು ಕಬ್ಬಿನ ಬಿಲ್ಲು ಮೊತ್ತವನ್ನು ಪಾವತಿಸಲು ಅವಕಾಶವಿರುವುದನ್ನು ಗಮನಿಸಬಹುದಾಗಿದೆ.

....4

| | | |
|---|---|---|
| ಈ) | BSSK ಕಾರ್ಖಾನೆ ಬಂದಾಗಲು ಕಾರಣವೇನು? (ವಿವರಿಸುವುದು) | ಈ ಕಾರ್ಖಾನೆಯು 2019-20ನೇ ಹಂಗಾಮಿನಿಂದ ಕಬ್ಬು ಅರೆಯುವ ಕಾರ್ಯವನ್ನು ಸ್ಥಗಿತಗೊಳಿಸಿರುತ್ತದೆ. ಕಾರ್ಖಾನೆಯು ಸ್ಥಗಿತಗೊಂಡಿರಲು ಪ್ರಮುಖ ಕಾರಣಗಳು ಈ ಕೆಳಕಂಡಂತಿರುತ್ತವೆ.<br>1. ಕಾರ್ಖಾನೆಯ ಆರ್ಥಿಕ ದುಸ್ಥಿತಿ ಮತ್ತು ದುಡಿಯುವ ಬಂಡವಾಳದ ಕೊರತೆ.<br>2. ಕಾರ್ಖಾನೆಯು ಸುಮಾರು 50 ವರ್ಷಗಳಷ್ಟು ಹಳೆಯದಾಗಿದ್ದು, ಹಾಲಿ ಇರುವ ಯಂತ್ರೋಪಕರಣಗಳು ಕಾರ್ಖಾನೆಯ ಪ್ರಸ್ತುತ ಇರುವ 3500 ಟಿಸಿಡಿ ಸಾಮರ್ಥ್ಯವನ್ನು ಉಪಯೋಗಿಸಲು ಸಾಧ್ಯವಾಗದಿರುವುದು.<br>3. ಕಾರ್ಖಾನೆಯು ಸಕ್ಕರೆ ಘಟಕವನ್ನು ಮಾತ್ರ ಹೊಂದಿದ್ದು, ಇತರೆ ಉಪ ಉತ್ಪನ್ನಗಳಾದ ಸಹವಿದ್ಯುತ್ ಘಟಕ ಹಾಗೂ ಡಿಸ್ಟಿಲರಿ/ಎಥನಾಲ್ ಘಟಕಗಳನ್ನು ಹೊಂದಿರುವುದಿಲ್ಲ.<br>4. ಹಾಲಿ ಕಾರ್ಖಾನೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ/ಕಾರ್ಮಿಕ ವರ್ಗದವರಲ್ಲಿ ತಾಂತ್ರಿಕ ಪರಿಣತಿ ಹೊಂದಿರುವ ಸಿಬ್ಬಂದಿಗಳ ಕೊರತೆ ಇರುವುದು.<br>5. ನಿರೀಕ್ಷಿತ ಪ್ರಮಾಣದಲ್ಲಿ ಕಬ್ಬಿನ ಲಭ್ಯತೆ ಇಲ್ಲದಿರುವುದು ಹಾಗೂ ಕಡಿಮೆ ಇಳುವರಿ ಸಾಧಿಸಿರುವುದು. |

ಸಿಐ 104 ಸಿಓಎಫ್ 2021

(ಎನ್.ನಾಗರಾಜು.ಎಂ.ಟಿ.ಬಿ.)
ಪೌರಾಡಳಿತ ಮತ್ತು ಸಕ್ಕರೆ ಸಚಿವರು